# ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

**ವಿಷಯ:** 2017-18ನೇ ಸಾಲಿನಲ್ಲಿ ರಾಜ್ಯವಲಯ ಯೋಜನೆಯಡಿ **"ಬಿದಾಯಿ"** ಯೋಜನೆಯ ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲುಡಿ 169 ಎಂಡಿಎಸ್ 2017, ದಿ: 06.04.2017

2. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2017 ದಿ: 10.01.2018

>>><<<

**ಪ್ರಸ್ತಾವನೆ:-**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳನ್ನು 2017-18ನೇ ಆರ್ಥಿಕ ಸಾಲಿನಲ್ಲಿ ಮುಂದುವರೆಸಿ ಉಲ್ಲೇಖ (1)ರಲ್ಲಿ ಆದೇಶ ಹೊರಡಿಸಲಾಗಿದೆ. ಅದರಲ್ಲಿ **"ಬಿದಾಯಿ"** ಕಾರ್ಯಕ್ರಮವು ಸಹ ಒಂದಾಗಿರುತ್ತದೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಯಗಳಿಗೆ 2017-18ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ನಾಲ್ಕನೇ ತ್ರೈಮಾಸಿಕ ಕಂತನ್ನು ಬಿಡುಗಡೆ ಮಾಡಿ ಉಲ್ಲೇಖ (2)ರ ಆದೇಶದಲ್ಲಿ ಬಿಡುಗಡೆ ಮಾಡಲಾಗಿದೆ.

ಅದರಲ್ಲಿ "ಬಿದಾಯಿ" ಯೋಜನೆಗೆ ನಾಲ್ಕನೇ ಕಂತಿನ ಅನುದಾನ ರೂ. 3375.00 (ರೂ. ಮೂವತ್ತ ಮೂರು ಕೋಟಿ ಎಪ್ಪತ್ತೈದು ಲಕ್ಷಗಳು ಮಾತ್ರ) ಗಳನ್ನು ಬಿಡುಗಡೆ ಮಾಡಿ ನಿರ್ದೇಶಕರು, ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು ಇವರ ವಶಕ್ಕೆ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನದಾನವನ್ನು ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ರವರಿಗೆ ಮರು ಬಿಡುಗಡೆ ಮಾಡಬೇಕಾಗಿರುವುದರಿಂದ ಈ ಆದೇಶ.

## ಆ ದೇ ಶ

**ಸಂಖ್ಯೆ: ಅಸಂನಿ/ಬಿದಾಯಿ/ಸಿಆರ್-1/2017-18** **ದಿನಾಂಕ: 11.01.2018**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ **"ಬಿದಾಯಿ"** ಕಾರ್ಯಕ್ರಮವನ್ನು ಜಾರಿಗೊಳಿಸಲು 2017-18ನೇ ಸಾಲಿನಲ್ಲಿ ಸರ್ಕಾರದಿಂದ ಬಿಡುಗಡೆಯಾದ ನಾಲ್ಕನೇ ಕಂತಿನ ಅನುದಾನದಲ್ಲಿ ರೂ. 3375.00 ಲಕ್ಷ (ರೂ. ಮುವತ್ತ ಮೂರು ಕೋಟಿ ಎಪ್ಪತ್ತ ಐದು ಲಕ್ಷಗಳು ಮಾತ್ರ) ಗಳನ್ನು ಲಗತ್ತಿಸಿರುವ ಅನುಬಂಧದಲ್ಲಿ ಆಯಾ ಜಿಲ್ಲೆ ಮುಂದೆ ತೋರಿಸಿರುವ ಮೊತ್ತವನ್ನು ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳಿಗೆ ಈ ಕೆಳಕಂಡ ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಲಾಗಿದೆ.